ಪ್ರಜಾವಾಣಿ

ವಾಣಿಜ್ಯ

ಬೆಂಗಳೂರು

# ಎಪಿಎಂಸಿ ಆನ್‌ಲೈನ್ ನಿಗಾ ಸಮಿತಿ

ಪ್ರಜಾವಾಣಿ ವಾರ್ತೆ

6 Jan, 2015

ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಆನ್‌ಲೈನ್ ಸೇವೆ ಒದಗಿಸುವ ಕಾರ್ಯಕ್ರಮಕ್ಕೆ ಮತ್ತಷ್ಟು ವೇಗ ನೀಡುವ ಉದ್ದೇಶದಿಂದ ಸಹಕಾರ ಇಲಾಖೆ , ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಕೃಷಿ ಉತ್ಪನ್ನ ಮಾರುಕಟ್ಟೆಗಳ ಸುಧಾರಣಾ ಮೇಲ್ವಿಚಾರಣಾ ಸಮಿತಿ ರಚಿಸಿದೆ.

**ಬೆಂಗಳೂರು:** ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಆನ್‌ಲೈನ್ ಸೇವೆ ಒದಗಿಸುವ ಕಾರ್ಯಕ್ರಮಕ್ಕೆ ಮತ್ತಷ್ಟು ವೇಗ ನೀಡುವ ಉದ್ದೇಶದಿಂದ ಸಹಕಾರ ಇಲಾಖೆ, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಕೃಷಿ ಉತ್ಪನ್ನ ಮಾರುಕಟ್ಟೆಗಳ ಸುಧಾರಣಾ ಮೇಲ್ವಿಚಾರಣಾ ಸಮಿತಿ ರಚಿಸಿದೆ. ಈ ಸಂಬಂಧ ಸೋಮವಾರ ಅಧಿಕೃತ ಆದೇಶ ಹೊರಡಿಸಲಾಗಿದೆ.

‘ರಾಜ್ಯದ 45 ಕೃಷಿ ಉತ್ಪನ್ನ ಮಾರಕಟ್ಟೆ ಸಮಿತಿಗಳಲ್ಲಿ ಆನ್‌ಲೈನ್ ಸೇವೆ ಒದಗಿಸುತ್ತಿದ್ದು, ಅದನ್ನು ಇತರ ಮಾರುಕಟ್ಟೆಗಳಿಗೂ ವಿಸ್ತರಿಸಬೇಕಾಗಿದೆ. ಪರಿಣಾಮಕಾರಿ ಅನುಷ್ಠಾನಕ್ಕೆ ಸ್ಥಳೀಯ ಮಟ್ಟದಲ್ಲಿ ಜಿಲ್ಲಾ ಸಮಿತಿಗಳ ಅಗತ್ಯ ಇದೆ ಎನ್ನುವ ಕಾರಣಕ್ಕೆ ಈ ತೀರ್ಮಾನಕ್ಕೆ ಬರಲಾಗಿದೆ’ ಎಂದು ಸಹಕಾರ ಇಲಾಖೆ ಹೆಚ್ಚುವರಿ ಕಾರ್ಯದರ್ಶಿ ಆರ್.ಮನೋಜ್ ತಿಳಿಸಿದ್ದಾರೆ.

‘ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಸಮಿತಿಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಕಾರ್ಯದರ್ಶಿಗಳು, ಕೇಂದ್ರ ಕಚೇರಿಯಿಂದ ನಿಯೋಜಿತರಾದ ಹೆಚ್ಚುವರಿ ನಿರ್ದೇಶಕರು ಸದಸ್ಯರಾಗಿರುತ್ತಾರೆ. ಕೃಷಿ ಮಾರಾಟ ಇಲಾಖೆಯ ಹಿರಿಯ ಅಧಿಕಾರಿಗಳು ಸಂಚಾಲಕರಾಗಿರುತ್ತಾರೆ’ ಎಂದು ಅವರು ಹೇಳಿದರು.

ಈ ಸಮಿತಿ ಮೇಲಿಂದ ಮೇಲೆ ಸಭೆ ಸೇರಿ, ಆನ್‌ಲೈನ್ ವ್ಯವಸ್ಥೆ ಜಾರಿಯಿಂದ ಎದುರಾಗುವ ಸಮಸ್ಯೆಗಳ ಬಗ್ಗೆ ಚರ್ಚಿಸಬೇಕು. ಅದನ್ನು ರಾಜ್ಯ ಮಟ್ಟದ ಅಧಿಕಾರಿಗಳ ಜತೆ ಹಂಚಿಕೊಂಡು, ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು ಎಂದು ಅವರು ವಿವರಿಸಿದರು.

ಮಾರುಕಟ್ಟೆ ವ್ಯಾಪ್ತಿಯ ರೈತರ ನೋಂದಣಿ, ಬ್ಯಾಂಕಿಂಗ್ ಸೌಲಭ್ಯ ಒದಗಿಸುವುದು, ರೈತರು ಮತ್ತು ಮಾರುಕಟ್ಟೆ ದಳ್ಳಾಳಿಗಳಿಗೆ ಆನ್‌ಲೈನ್ ವ್ಯವಸ್ಥೆ ಬಗ್ಗೆ ಮಾಹಿತಿ ನೀಡುವ ಕೆಲಸ ಕೂಡ ಈ ಸಮಿತಿ ಮಾಡಲಿದೆ ಎಂದು ಅವರು ತಿಳಿಸಿದರು.